# Marathon 2K25

**Date: 10th January 2025**




Description: National Youth Day is dedicated to the memory and teachings of Swami Vivekananda, emphasizing youth empowerment, mental and physical strength, and innovation. The Marathon 2K25 aimed to inspire participants to adopt a balanced approach toward personal growth by encouraging both fitness and creativity.

## ಸಂಯುಕ್ತ ಕರ್ನಾಟಕ

# ಸ್ವಾಮಿ ವಿವೇಕಾನಂದರ ಚಿಂತನೆ ಮೈಗೂಡಿಸಿಕೊಳ್ಳಿ: ತಿಪ್ಪೇಸ್ವಾಮಿ



ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವದ ಅಂಗವಾಗಿ ಡಾ.ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ ಮಲ್ಲತಳ್ಳಿಯಲ್ಲಿ ಮ್ಯಾರಥಾನ್ ಗೆ ಚಾಲನೆ ನೀಡಲಾಯಿತು. ಈ ವೇಳೆ ಬೆಂಗಳೂರು ವಿವಿ ಪ್ರೊ. ಡಾ. ಪಿ ರಾಘವೇಂದ್ರ ಸೇರಿದಂತೆ ಇನ್ನಿತರರು ಭಾಗಿಯಾಗಿದ್ದರು.

**ಬೆಂಗಳೂರು:** ಸ್ವಾಮಿ ವಿವೇಕಾನಂದರ ಚಿಂತನೆಗಳನ್ನು ಮೈಗೂಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲ ಡಾ.ಎಂ.ಎನ್.ತಿಪ್ಪೇಸ್ವಾಮಿ ಕಿವಿಮಾತು ಹೇಳಿದರು. ಸ್ವಾಮಿ ವಿವೇಕಾನಂದರ ಜನ್ಮದಿನ ನೆನಪಿನಲ್ಲಿ ಆಚರಿಸಲಾಗುವ ರಾಷ್ಟ್ರೀಯ ಯುವ ದಿನ ಅಂಗವಾಗಿ ಡಾ.ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ ಮಲ್ಲತಳ್ಳಿಯಲ್ಲಿ ನಡೆದ ಮ್ಯಾರಥಾನ್‌ಯಲ್ಲಿ ಮಾತನಾಡಿದ ಅವರು, ಅದೃಷ್ಟ ಎಂದರೆ ಅವಕಾಶವನ್ನು ಪಡೆಯುವವನು, ಬುದ್ಧಿವಂತ ಎಂದರೆ ಅವಕಾಶವನ್ನು ಸೃಷ್ಟಿಸಿಕೊಳ್ಳುವವನು ಎಂದರು.

ಬೆಂ.ವಿವಿ ಪ್ರೊ. ಡಾ.ಪಿ ರಾಘವೇಂದ್ರ ಮಾತನಾಡಿ, ಯುವಕರು ಉತ್ತಮ ಸಾಮಾಜಿಕ ಮೌಲ್ಯಗಳನ್ನು ಮೈಗೂಡಿಸಿಕೊಂಡು ವಿವಿಧ ಕ್ಷೇತ್ರದಲ್ಲಿ ಭಾಗವಹಿಸಿ ರಾಷ್ಟ್ರದ ಏಳಿಗೆಗೆ ಶ್ರಮಿಸಬೇಕು. ವಿವೇಕಾನಂದರು ದೇಶ ಕಂಡ ಮಹಾನ್ ಸಂತ ಹಾಗೂ ಚಿಲುಮೆಯ ಸ್ಪೂರ್ತಿ ಎಂದು ತಿಳಿಸಿದರು. ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್

## ಪ್ರಜಾ ಪ್ರಗತಿ

# ಸಾಮಾಜಿಕ ಮೌಲ್ಯ ಮೈಗೂಡಿಸಿಕೊಳ್ಳಲು ಯುವಕರಿಗೆ ಕರೆ



ಬೆಂಗಳೂರು: ಯುವಕರೇ ರಾಷ್ಟ್ರದ ಶಕ್ತಿ ಎಂಬ ಹೇಳಿಕೆಯಂತೆ ದಿನಾಂಕ 10/01/2025 ರಂದು ಸ್ವಾಮಿ ವಿವೇಕಾನಂದರ ಜಯಂತಿಯ ಸವಿನೆನಪಿನಲ್ಲಿ ಆಚರಿಸಲಾಗುವ ರಾಷ್ಟ್ರೀಯ ಯುವ ದಿನ ಅಂಗವಾಗಿ ಡಾ॥ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ ಮಲ್ಲತಳ್ಳಿ ಬೆಂಗಳೂರು ಇಲ್ಲಿ ಮ್ಯಾರಥಾನ್ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಪಿ ರಾಘವೇಂದ್ರ ಅವರು ಯುವಕರು ಉತ್ತಮ ಸಾಮಾಜಿಕ ಮೌಲ್ಯಗಳನ್ನು ಮೈಗೂಡಿಸಿಕೊಂಡು ವಿವಿಧ ಕ್ಷೇತ್ರದಲ್ಲಿ ಭಾಗವಹಿಸಿ ರಾಷ್ಟ್ರದ ಏಳಿಗೆಗೆ ಶ್ರಮಿಸಬೇಕು ಎಂದು ಹೇಳುತ್ತಾವಿವೇಕಾನಂದರು ದೇಶ ಕಂಡ ಮಹಾನ್ ಸಂತ ಹಾಗೂ ಚಿಲುಮೆಯ ಸ್ಪೂರ್ತಿ, ಅವರು ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಸಂಚರಿಸಿ ದೇಶ ಸ್ವತಂತ್ರ ಪಡೆಯುವುದರ ಬಗ್ಗೆ ಒಂದು ಮಾತು ಹೇಳಿದರು ನನಗೆ ಬೇಕಾಗಿರುವುದು ಕಬ್ಬಿಣದ ಸ್ನಾಯುಗಳು, ಉಕ್ಕಿನ ನರಗಳು ಮತ್ತು ಸಿಡಿಲಿನಂತ ಮನಸ್ಸು ಗಳು, ಅಂತಹ ಕೆಲವೇ ತರುಣರಿಂದ ದೇಶದ ಭವಿಷ್ಯವನ್ನೇ ಬದಲಾಯಿಸಬಲ್ಲೆ ಎಂದು ವಿವೇಕಾನಂದರು ಹೇಳಿದ್ದರು ಆಧ್ಯಾತ್ಮಿಕ ಶಕ್ತಿಯೊಂದಿಗೆ ದೈಹಿಕ ಶಕ್ತಿ ಮುಖ್ಯವಾಗಿದೆ ಎಂದು ಪ್ರತಿ ಬಾರಿ ಪ್ರತಿಪಾದಿಸುತ್ತಿದ್ದರು ಎಂದು ಯುವಕರನ್ನು ಉದ್ದೇಶಿಸಿ ಹೇಳಿದರು.ಕಾಲೇಜಿನ ಪ್ರಾಂಶುಪಾಲರಾದ ಡಾ॥ ಎಂ. ಎನ್. ತಿಪ್ಪೇಸ್ವಾಮಿ ಅವರು ಮಾತನಾಡಿ ಅದೃಷ್ಟ ಎಂದರೆ ಅವಕಾಶವನ್ನು ಪಡೆಯುವವನು, ಬುದ್ಧಿವಂತ ಎಂದರೆ ಅವಕಾಶವನ್ನು ಸೃಷ್ಟಿಸಿಕೊಳ್ಳುವವನು ಎಂದು ಹೇಳುತ್ತಾ ವಿವೇಕಾನಂದರ ಚಿಂತನೆಗಳನ್ನು ಮೈಗೂಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್ ರಾದ ಶ್ರೀಯುತ ಪುನೀತ್ ನಂದಕುಮಾರ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ಈ ಕಾರ್ಯಕ್ರಮದಲ್ಲಿ ಡಾ. ಟಿ.ಎನ್. ರಾಜು ಮುಖ್ಯಸ್ಥರು ಯಾಂತ್ರಿಕ ವಿಭಾಗ, ಸುಮಾರು 500 ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದರು.

Bangalore Edition
Jan 11, 2025 Page No. 5
Powered by: erelego.com

## ವಿಶ್ವವಾಣಿ

ವಿಶ್ವಾಸವೇ ವಿಶ್ವ




ಸ್ವಾಮಿ ವಿವೇಕಾನಂದರ ಜಯಂತಿಯ ಅಂಗವಾಗಿ ಡಾ. ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮ್ಯಾರಥಾನ್ ಆಯೋಜಿಸಲಾಗಿತ್ತು. ಈ ವೇಳೆ ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಪಿ ರಾಘವೇಂದ್ರ, ಪ್ರಾಂಶುಪಾಲರಾದ ಡಾ. ಎಂ. ಎನ್. ತಿಪ್ಪೇಸ್ವಾಮಿ, ಪ್ಯಾರಾ ಸ್ವಿಮ್ಮಿಂಗ್ ಚಾಂಪಿಯನ್ ಪುನೀತ್ ನಂದಕುಮಾರ್ ಸೇರಿದಂತೆ 500 ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದರು.

ಸರ್ ಎಂ.ವಿಶ್ವೇಶ್ವರಯ್ಯ ಬ್ಯಾಂಕ್ ಪ್ರಗತಿ ತಂಡದ ಪರ ಕಾರ್ಯಕ್ರಮ | ಹಿರಿಯರ ಪರಿಶ್ರಮಕ್ಕೆ ಅ